## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ನಗರಕ್ಕೆ ಕುಡಿಯುವ ನೀರು ಸರಬರಾಜು ಉದ್ದೇಶಕ್ಕಾಗಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಹೆಚ್ಚುವರಿ ನೀರನ್ನು ಹಂಚಿಕೆ ಮಾಡುವ ಬಗ್ಗೆ

+++++

ಓದಲಾಗಿದೆ :

ಸರ್ಕಾರದ ಆದೇಶ ಸಂಖ್ಯೆ: ಜಸಂಇ 60 ಎಂಎಂಕೆ 2013 ದಿನಾಂಕ:20.04.2016

ಪ್ರಸ್ತಾವನೆ :

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ಬೆಂಗಳೂರು ನಗರದ ಕುಡಿಯುವ ನೀರಿನ ಅವಶ್ಯಕತೆಗಾಗಿ ಕಾವೇರಿ ನದಿಯಿಂದ ಹೆಚ್ಚುವರಿಯಾಗಿ 10 ಟಿ.ಎಂ.ಸಿ ನೀರನ್ನು ತಾತ್ವಿಕವಾಗಿ ಮರುಹಂಚಿಕೆ ಮಾಡಲಾಗಿರುತ್ತದೆ.

2. ಕಾವೇರಿ ಜಲವಿವಾದ ನ್ಯಾಯಾಧೀಕರಣದ ದಿನಾಂಕ:05.02.2007ರ ತೀರ್ಪಿನ ಕುರಿತು ಕಣಿವೆ ರಾಜ್ಯಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಿದ್ದ ಸಿವಿಲ್ ಅಪೀಲ್‌ಗಳ ಕುರಿತು ದಿನಾಂಕ:16.02.2018ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನಲ್ಲಿ ಬೆಂಗಳೂರು ಕುಡಿಯುವ ನೀರಿನ ಅಗತ್ಯತೆಯು ಸೇರಿದಂತೆ ಕಾವೇರಿ ಕಣಿವೆಯ ಕುಡಿಯುವ ನೀರಿನ ಅಗತ್ಯತೆಗಾಗಿ ಒಟ್ಟಾರೆ 33 ಟಿ.ಎಂ.ಸಿ (6.5 ಟಿ.ಎಂ.ಸಿ Consumptive Use) ಎಂದು ಹಂಚಿಕೆ ಮಾಡಿದ್ದು ಬೆಂಗಳೂರು ಕುಡಿಯುವ ನೀರಿಗಾಗಿ 4.75 ಟಿ.ಎಂ.ಸಿ (Consumptive Use) ಹಂಚಿಕೆ ಮಾಡಲಾಗಿದೆ ಹಾಗೂ ಬೆಂಗಳೂರು ಕುಡಿಯುವ ನೀರಿನ ಅಗತ್ಯತೆಯನ್ನು ಒಟ್ಟಾರೆ 24.00 ಟಿ.ಎಂ.ಸಿ ಎಂದು ಪರಿಗಣಿಸಲಾಗಿರುತ್ತದೆ. ಪ್ರಸ್ತುತ ಕುಡಿಯುವ ನೀರಿಗಾಗಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು 18 ಟಿ.ಎಂ.ಸಿ ನೀರನ್ನು ಬಳಸುತ್ತಿದ್ದು, ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ:16.02.2018ರ ಆದೇಶದಲ್ಲಿ ಬೆಂಗಳೂರಿಗಾಗಿ ಹೆಚ್ಚುವರಿಯಾಗಿ ಪರಿಗಣಿಸಲಾಗಿರುವ ಒಟ್ಟಾರೆ 24.00 ಟಿ.ಎಂ.ಸಿ ಪ್ರಮಾಣದಲ್ಲಿ ಉಳಿಕೆ 6.00 ಟಿ.ಎಂ.ಸಿ ನೀರನ್ನು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಹೆಚ್ಚುವರಿಯಾಗಿ ಹಂಚಿಕೆ ಮಾಡುವ ವಿಷಯವನ್ನು ಸರ್ಕಾರದಲ್ಲಿ ಪರಿಶೀಲಿಸಲಾಗಿದೆ.

ಅದರಂತೆ ಕೆಳಕಂಡ ಆದೇಶ:

**ಸರ್ಕಾರಿ ಆದೇಶ ಸಂಖ್ಯೆ: ಜಸಂಇ 136 ಎಂಎಂಕೆ 2023,**

**ಬೆಂಗಳೂರು, ದಿನಾಂಕ: 07.11.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ಕುಡಿಯುವ ನೀರಿಗಾಗಿ ಕಾವೇರಿ ನದಿಯಿಂದ ಹೆಚ್ಚುವರಿಯಾಗಿ 6.00 ಟಿ.ಎಂ.ಸಿ ನೀರನ್ನು ಉಪಯೋಗಿಸಲು, ಒಟ್ಟಾರೆ 24.00 ಟಿ.ಎಂ.ಸಿ ಗೆ ಮಿತಿಗೊಳಿಸಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಗೆ ಹಂಚಿಕೆ ಮಾಡಲಾಗಿದೆ.

2. ಸದರಿ ವಿಷಯದ ಕುರಿತು ಸರ್ಕಾರದಿಂದ ಈ ಹಿಂದೆ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ರದ್ದುಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

07/11/2023

(ಮನೋಹರ ವೈ. ರೊಟ್ಟೆ)
ವಿಶೇಷ ಕರ್ತವ್ಯಾಧಿಕಾರಿ
ಜಲಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ)/(ಇ&ಆರ್.ಎಸ್.ಎ)/(ಎ&ಇ), ಕರ್ನಾಟಕ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು
3. ಅಧ್ಯಕ್ಷರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು
5. ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
6. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಇಲಾಖೆ, ಬೆಂಗಳೂರು
7. ಮುಖ್ಯ ಇಂಜಿನಿಯರ್ (ಅಂರಾಜ), ಜಲಸಂಪನ್ಮೂಲ ಇಲಾಖೆ, ಬೆಂಗಳೂರು
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು/ಸರ್ಕಾರದ ಉಪ ಕಾರ್ಯದರ್ಶಿಗಳು (ಕೆಬಿಜೆಎನ್/ಎಂಎಂಐ) ರವರ ಆಪ್ತ ಕಾರ್ಯದರ್ಶಿಗಳು/ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.